ಕರ್ನಾಟಕ ಸರ್ಕಾರ
(ಸಿ.ಆರ್.ಪಿ.67)

| |
|---|
| ಹೇಳಿಕೆ ಹಾಳೆ<br>(ಆರ್.ಪಿ.ಸಂಖ್ಯೆ 57)<br>ನಮೂನೆ ಸಂಖ್ಯೆ 4 |

**ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರ ನ್ಯಾಯಾಲಯ, ಹಾಸನ**

**ಸೆಷನ್ಸ್ ಕೇಸ್ ನಂಬರ್ : 250/2022**

**ಫ್ರಾಸಾ- 8 ಚಾಸಾ- 10**

| | | |
|---|---|---|
| ಸಾಕ್ಷಿದಾರರ ಹೆಸರುಃ | : | ವಿಜಯ ಕುಮಾರ್ |
| ತಂದೆಯ ಹೆಸರುಃ | : | ಪುಟ್ಟಸ್ವಾಮಿಗೌಡ |
| ವಯಸ್ಸುಃ | : | 40 ವರ್ಷ |
| ಉದ್ಯೋಗಃ | : | ವ್ಯವಸಾಯ |
| ವಾಸ | : | ದೊಡ್ಡಮಂಡಿಗನಹಳ್ಳಿ |

**ಸಾಕ್ಷಿಯನ್ನು ಕರೆಸಿ ಪ್ರಮಾಣವಚನ ಬೋಧಿಸಿದ ದಿನಾಂಕ:09-02-2026:**

**ಮುಖ್ಯ ವಿಚಾರಣೆಃ ಸರ್ಕಾರದ ಪರವಾಗಿ ಮಾನ್ಯ ಅಭಿಯೋಜಕರಿಂದಃ**

ಈಗ ತೋರಿಸಿದ ನಿಪಿ-7ರಲ್ಲಿರುವ ರುಜು ನನ್ನದೆ. ಅದನ್ನು ನಿಪಿ-7(ಬಿ) ಎಂದು ಗುರುತಿಸಲಾಯಿತು. 3 ವರೆ ವರ್ಷಗಳ ಹಿಂದೆ ಆರೋಪಿಯ ತಂದೆ ಬಸವರಾಜುರವರ ಮನೆಯಲ್ಲಿ ಸದರಿ ಸಹಿ ಹಾಕಿರುತ್ತೇನೆ. ಅಲ್ಲಿ ಮಂಜುನಾಥ್ ರವರ ಹೆಂಡತಿ ತೀರಿಕೊಂಡಿದ್ದರು. ಅವರು ನೇಣುಹಾಕಿಕೊಂಡಿದ್ದರು. ಅಲ್ಲಿ ಪೊಲೀಸರು ಮಹಜರು ಮಾಡುತ್ತಿದ್ದರು. ನ್ಯಾಯಾಲಯದ ಮುಂದಿರುವ ಎಂ.ಒ.1 ರಿಂದ 3ನ್ನು ನಾನು ಈ ಹಿಂದೆ ನೋಡಿಲ್ಲ. ಅವುಗಳನ್ನು ನನ್ನ ಸಮಕ್ಷಮ ವಶಪಿಪಡಿಸಿಕೊಂಡಿಲ್ಲ. ನಿಪಿ-7ರಲ್ಲಿ ಬರೆದ ವಿಚಾರವನ್ನು ನಾನು ಓದಿ ನೋಡಿಲ್ಲ, ಅದನ್ನು ಪೊಲೀಸರು ಓದಿ ಹೇಳಿಲ್ಲ.

(ಈ ಹಂತದಲ್ಲಿ ಮಾನ್ಯ ಅಭಿಯೋಜಕರು ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ಕೋರುತ್ತಾರೆ, ಕಡತವನ್ನು ಪರಿಶೀಲಿಸಲಾಗಿ ಸಾಕ್ಷಿಯು ಹೇಳಿಕೆಗೆ ವ್ಯತಿರಿಕ್ತವಾಗಿ ಸಾಕ್ಷ್ಯ ನುಡಿಯುವುದು ಕಂಡುಬರುತ್ತದೆ, ಆದ್ದರಿಂದ ಮಾನ್ಯ ಅಭಿಯೋಜಕರ ಕೋರಿಕೆಯನ್ನು ಮನ್ನಿಸಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ, ಪಾಟೀಸವಾಲಿಗೆ ಒಳಪಡಿಸಲು ಅನುಮತಿ ನೀಡಲಾಗಿದೆ)

**ಪಾಟೀಸವಾಲುಃ ಸರ್ಕಾರದ ಪರ ಮಾನ್ಯ ಅಭಿಯೋಜಕರಿಂದಃ**

ಮಹಜರು ಕಾಲದಲ್ಲಿ ಪೊಲೀಸರು ಎಂ.ಒ.1 ರಿಂದ 3 ರಂತೆ ವಶಪಡಿಸಿಕೊಂಡರು ಎಂದರೆ

ಸರಿಯಲ್ಲ. ಆ ರೀತಿ ಅವುಗಳನ್ನು ವಶಪಡಿಸಿಕೊಂಡು ನಿಪಿ-7 ರಂತೆ ಮಾಡಿದ ಮಹಜರಿಗೆ ನಾನು ಸಹಿ ಹಾಕಿದ್ದು ಎಂದರೆ ಸರಿಯಲ್ಲ. ಆರೋಪಿತರಿಗೆ ಸಹಾಯ ಮಾಡುವ ಸಲುವಾಗಿ ಎಂನ.ಒ.1 ರಿಂದ 3 ನ್ನು ನನ್ನ ಸಮಕ್ಷಮ ವಶಪಡಿಸಿಕೊಂಡಿಲ್ಲ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀಸವಾಲುಃ ಆರೋಪಿ ಪರ ಶ್ರೀ ಎಂ ಬಿ ವಿ ವಕೀಲರಿಂದಃ**

ಇಲ್ಲವೆಂದು ಹೇಳುತ್ತಾರೆ..

**ಮರು ವಿಚಾರಣೆಃ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೂಲಕ ಬೆರಳಚ್ಚು ಮಾಡಿಸಲಾಯಿತು)

**ಓ.ಹೇ.ಕೇ.ಸ.ಇದೆ.**

**ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು,**

**ಹಾಸನ.**